# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : **134**
**ಸದಸ್ಯರ ಹೆಸರು** : ಶ್ರೀ ರಘುನಾಥ್ ರಾವ್ ಮಲ್ಕಾಪೂರೆ
(ವಿಧಾನ ಸಭಾ ಕ್ಷೇತ್ರದಿಂದ ಚುನಾಯಿತರಾದವರು)
**ಉತ್ತರಿಸಬೇಕಾದ ದಿನಾಂಕ** : 13.12.2021
**ಉತ್ತರಿಸುವ ಸಚಿವರು** : ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

*****

| | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಜಿಲ್ಲೆಯ ಎಲ್ಲಾ ವಿಧಾನ ಸಭಾ ಕ್ಷೇತ್ರದಲ್ಲಿ ಜೆಸ್ಕಾಂ ಇಲಾಖೆಯಲ್ಲಿ ಅಕ್ರಮ ಸಕ್ರಮಕ್ಕಾಗಿ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು; ಮತ್ತು ಎಷ್ಟು ವರ್ಷಗಳಿಂದ ಬಾಕಿ ಉಳಿದಿವೆ; ಬಾಕಿ ಉಳಿಯಲು ಕಾರಣಗಳೇನು; (ವಿಧಾನ ಸಭಾ ಕ್ಷೇತ್ರವಾರು ಸ್ಪಷ್ಟ ಮಾಹಿತಿ ನೀಡುವುದು) | ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ ವ್ಯಾಪ್ತಿಯ ಬೀದರ್ ಜಿಲ್ಲೆಯಲ್ಲಿ ಬರುವ ವಿಧಾನಸಭಾ ಕ್ಷೇತ್ರವಾರು ಅಕ್ರಮ ಸಕ್ರಮಕ್ಕಾಗಿ ಏಪ್ರಿಲ್-2011 ರಿಂದ ಅಕ್ಟೋಬರ್-2021ರ ಅಂತ್ಯದವರೆಗೆ ಒಟ್ಟು 13624 ಅರ್ಜಿಗಳು ಸ್ವೀಕೃತಗೊಂಡಿದ್ದು, 12408 ಅರ್ಜಿದಾರರು ಮೂಲಭೂತ ಸೌಕರ್ಯ ಶುಲ್ಕ ರೂ.10,000/-ಗಳನ್ನು ಪಾವತಿಸಿರುತ್ತಾರೆ ಹಾಗೂ ಮೂಲಭೂತ ಸೌಕರ್ಯ ಶುಲ್ಕ ರೂ.10,000/-ಗಳನ್ನು ಪಾವತಿಸದ 1216 ಅರ್ಜಿಗಳು ಬಾಕಿ ಉಳಿದಿರುತ್ತವೆ ವಿವರಗಳನ್ನು **ಅನುಬಂಧ**ದಲ್ಲಿ ಒದಗಿಸಿದೆ.<br><br>12408 ಅರ್ಜಿದಾರರು ಮೂಲಭೂತ ಸೌಕರ್ಯ ಶುಲ್ಕ ರೂ.10,000/-ಗಳನ್ನು ಪಾವತಿಸಿರುವ ಅರ್ಜಿಗಳ ಪೈಕಿ 10405 ಅರ್ಜಿದಾರರ ಸ್ಥಾವರಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿರುತ್ತದೆ. ಬಾಕಿ ಉಳಿದಿರುವ 2003 ಕೃಷಿ ಪಂಪ್‌ಸೆಟ್‌ಗಳಿಗೆ ಮೂಲಭೂತ ಸೌಕರ್ಯ ಕಲ್ಪಿಸುವ ಕಾಮಗಾರಿಗಳು ಪ್ರಗತಿಯಲ್ಲಿರುತ್ತವೆ. |
| ಆ) | ರೈತರ ಅರ್ಜಿಗಳ ವಿಲೇವಾರಿ ವಿಳಂಬಕ್ಕೆ ಕಾರಣಗಳೇನು; (ವಿವರ ನೀಡುವುದು) | |
| ಇ) | ಅರ್ಜಿಗಳ ತ್ವರಿತ ವಿಲೇವಾರಿಗೆ ಸರ್ಕಾರ ಕೈಗೊಂಡ ಕ್ರಮಗಳೇನು; (ಸಂಪೂರ್ಣ ಮಾಹಿತಿ ನೀಡುವುದು) | |
| ಈ) | ಹಾಗಿದ್ದಲ್ಲಿ ಯಾವ ಕಾಲಮಿತಿಯೊಳಗೆ ವಿಲೇವಾರಿಗೊಳಿಸಲು ಉದ್ದೇಶಿಸಲಾಗಿದೆ ? | |

ಸಂಖ್ಯೆ: ಎನರ್ಜಿ 257 ಇಬಿಎಸ್ 2021

(ವಿ ಸುನಿಲ್ ಕುಮಾರ್)
ಇಂಧನ ಹಾಗೂ ಕನ್ನಡ ಮತ್ತು
ಸಂಸ್ಕೃತಿ ಸಚಿವರು